೧

**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: ಆರ್ಥಿಕ ಇಲಾಖೆಯು ಅನುಮತಿ ನೀಡಿದೆ ಎಂದು ಭಾವಿಸಬಹುದಾದ ಸಂದರ್ಭಗಳು-ಚಿಕಿತ್ಸೆಗಾಗಿ ಮುಂಗಡ ಠೇವಣಿ ಪಾವತಿ ಆದೇಶವನ್ನು ಮಾರ್ಪಡಿಸುವ ಬಗ್ಗೆ.

**ಓದಲಾಗಿದೆ:**

1. ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ 1 ಟಿಎಫ್‌ಪಿ 96 ದಿನಾಂಕ: 10.7.96.
2. ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ 4 ಟಿಎಫ್‌ಪಿ 99(1), ದಿನಾಂಕ: 15.10.99.
3. ಅಧಿಸೂಚನೆ ಸಂಖ್ಯೆ: ಸಿಆಸುಇ 1 ಎಸ್‌ಎಂಆರ್ 2000 ದಿನಾಂಕ:22.01.2001
4. ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ 2(1) ಟಿಎಫ್‌ಪಿ 2001, ದಿನಾಂಕ: 17.4.2001
5. ಸರ್ಕಾರಿ ಸೇರ್ಪಡೆ ಆದೇಶ ಸಂಖ್ಯೆ: ಎಫ್‌ಡಿ 02 ಟಿಎಫ್‌ಪಿ 01, ದಿನಾಂಕ: 10.7.2001
6. ಅಧಿಸೂಚನೆ ಸಂಖ್ಯೆ: ಸಿಆಸುಇ 2 ಎಸ್‌ಎಂಆರ್ 2008 ದಿನಾಂಕ:24.10.2009
7. ಅನಧಿಕೃತ ಟಿಪ್ಪಣಿ ಸಂಖ್ಯೆ: ಸಿಆಸುಇ 16 ಎಸ್‌ಎಂಆರ್ 2009 ದಿನಾಂಕ:12.11.2009

**ಪ್ರಸ್ತಾವನೆ:**

ಮೇಲಿನ ಕ್ರಮಾಂಕ (1) ಮತ್ತು (2) ರಲ್ಲಿ ಉಲ್ಲೇಖಿಸಲಾದ ಸರ್ಕಾರಿ ಆದೇಶಗಳಲ್ಲಿ ಆರ್ಥಿಕ ಇಲಾಖೆಯು ಕರ್ನಾಟಕ ಸರ್ಕಾರಿ (ವ್ಯವಹಾರ ನಿರ್ವಹಣೆ) ನಿಯಮಗಳು, 1977 ರ ನಿಯಮ 45 ರಲ್ಲಿ ಉದ್ದೇಶಿಸಿದಂತೆ ತನ್ನ ಅನುಮತಿಯನ್ನು ನೀಡಲಾಗಿದೆ ಎಂದು ಭಾವಿಸಬಹುದಾದ ಪ್ರಕರಣಗಳನ್ನು ಆದೇಶದ ಅನುಬಂಧದಲ್ಲಿ ನಮೂದಿಸಿದಂತೆ ಗೊತ್ತುಪಡಿಸಿದೆ.

ಮೇಲೆ (4) ಮತ್ತು (5) ರಲ್ಲಿ ಓದಲಾದ ಆದೇಶಗಳಲ್ಲಿ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮ 1963 ರಲ್ಲಿ ನಿಗದಿಪಡಿಸಿರುವ ಷರತ್ತುಗಳನ್ನು ಪೂರೈಸುವುದರ ನಿಬಂಧನೆಗಳಿಗೆ ಒಳಪಟ್ಟು ಗ್ರೂಪ್ **'ಎ' ಮತ್ತು 'ಬಿ'** ದರ್ಜೆಯ ಅಧಿಕಾರಿಗಳು ಸರ್ಕಾರಿ ಆದೇಶ ಸಂಖ್ಯೆ: ಡಿಪಿಎಆರ್ 1 ಎಸ್‌ಎಂಆರ್ 2000 ದಿನಾಂಕ:22.1.2001 ರ ಷೆಡ್ಯೂಲ್–1 ರಲ್ಲಿ ಸೂಚಿಸಿರುವ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯಲು ಷೆಡ್ಯೂಲ್ 2 ಮತ್ತು 3 ರಲ್ಲಿ ಸೂಚಿಸಿದ ದರಗಳಂತೆ ಪಡೆಯುವ ಚಿಕಿತ್ಸೆಗಾಗಿ ಮುಂಗಡ ಠೇವಣಿ ಪಾವತಿ ಮಂಜೂರು ಮಾಡಲು **ಇಲಾಖಾ ಕಾರ್ಯದರ್ಶಿಗಳಿಗೆ** ಅಧಿಕಾರವನ್ನು ಪ್ರತ್ಯಾಯೋಜಿಸಲಾಗಿತ್ತು.

ಮೇಲೆ ಕ್ರಮಾಂಕ (6) ರಲ್ಲಿನ ಅಧಿಸೂಚನೆಯಲ್ಲಿ ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು, 1963 ಕ್ಕೆ ಮಾಡಿರುವ ತಿದ್ದುಪಡಿಗಳಲ್ಲಿ ನಿಯಮ 14 ಕ್ಕೆ ಸಂಬಂಧಪಟ್ಟಂತೆ ಅನುಸೂಚಿ–2 ಹಾಗೂ ಅನುಸೂಚಿ–3 ನ್ನು ಕೈಬಿಡಲಾಗಿದ್ದು ಸಿ.ಜಿ.ಹೆಚ್.ಎಸ್ ದರಗಳನ್ನು ಅಳವಡಿಸಿಕೊಂಡಿರುವುದರಿಂದ ಮುಂಗಡ ಠೇವಣಿ ಮಂಜೂರಾತಿಯ ಆದೇಶಗಳನ್ನು ಸೂಕ್ತವಾಗಿ ಪರಿಷ್ಕರಿಸುವಂತೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಅಧೀನ ಕಾರ್ಯದರ್ಶಿಯವರು ದಿನಾಂಕ: 12.11.2009ರ ಅನಧಿಕೃತ ಟಿಪ್ಪಣಿಯಲ್ಲಿ ಕೋರಿರುತ್ತಾರೆ.

....2

ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಆಇ 9 ಟಿಎಫ್‌ಪಿ 2009,(1)**
**ಬೆಂಗಳೂರು, ದಿನಾಂಕ: 12-01-2010.**

ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 2(1) ಟಿಎಫ್‌ಪಿ 2001 ದಿನಾಂಕ:17–4–2001 ಮತ್ತು ದಿನಾಂಕ:10–7–2001 ರ ಸೇರ್ಪಡೆ ಆದೇಶವನ್ನು ಈ ಕೆಳಗಿನಂತೆ ಮಾರ್ಪಡಿಸಲಾಗಿದೆ.

ಕ್ರಮಾಂಕ: (1) ರಲ್ಲಿ ಓದಲಾದ ದಿನಾಂಕ:10–7–1996 ರ ಸರ್ಕಾರಿ ಆದೇಶದ ಅನುಬಂಧದ ಕ್ರಮ ಸಂಖ್ಯೆ 55 ರ ನಂತರ ಈ ಕೆಳಕಂಡ ಅಂಶವನ್ನು 55 (1) ಎಂದು ಸೇರಿಸಿ ಓದಿಕೊಳ್ಳತಕ್ಕದ್ದು.

"ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮ 1963 ರಲ್ಲಿ ನಿಗದಿ ಪಡಿಸಿರುವ ಷರತ್ತುಗಳನ್ನು ಪೂರೈಸುವುದರ ನಿಬಂಧನೆಗಳಿಗೆ ಒಳಪಟ್ಟು ಗ್ರೂಪ್ **'ಎ' ಮತ್ತು 'ಬಿ'** ದರ್ಜೆಯ ಅಧಿಕಾರಿಗಳು ಸದರಿ ನಿಯಮಗಳ ಷೆಡ್ಯೂಲ್ 1 ರಲ್ಲಿ ಸೂಚಿಸಿರುವ ಆಸ್ಪತ್ರೆಗಳಲ್ಲಿ, ಚಿಕಿತ್ಸೆ ಪಡೆಯಲು ಸರ್ಕಾರಿ ಅಧಿಸೂಚನೆ ಸಂಖ್ಯೆ:ಸಿಆಸುಇ 2 ಎಸ್‌ಎಂಆರ್ 2008 ದಿನಾಂಕ: 24–10–2009 ರ ಕಂಡಿಕೆ 5(ii)(3) ರಲ್ಲಿ ವಿವರಿಸಿರುವಂತೆ ಭಾರತ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯವು ಕೇಂದ್ರ ಸರ್ಕಾರದ ಆರೋಗ್ಯ ಸೇವೆಗಳಡಿಯಲ್ಲಿ (CGHS) ಕಾಲಕಾಲಕ್ಕೆ ವಿವಿಧ ರೋಗ ನಿರ್ಣಯ ವಿಧಾನಗಳಿಗೆ ಮತ್ತು ಚಿಕಿತ್ಸೆಗಳಿಗೆ ನಿಗದಿಪಡಿಸುವ ದರಗಳಂತೆ ಪಡೆಯುವ ಚಿಕಿತ್ಸೆಗಾಗಿ ಮುಂಗಡ ರೇವಣಿ ಪಾವತಿ ಮಾಡಲು ಮಂಜೂರಾತಿ".

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

12/1/2010
(ಸಿ. ಶಾಮರಾವ್)
ಸರ್ಕಾರದ ಅಧೀನ ಕಾರ್ಯದರ್ಶಿ.
(ಆರ್ಥಿಕ ನಿಯಮಗಳು, ಆಯವ್ಯಯ ಸಂಕಲನ
ಮತ್ತು ಸಮಿತಿ ಶಾಖೆ)
ಆರ್ಥಿಕ ಇಲಾಖೆ.

ಗೆ:

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ ಇವರಿಗೆ ಮುಂದಿನ ರಾಜ್ಯ ಪತ್ರದ ಸಂಚಿಕೆಯಲ್ಲಿ ಪ್ರಕಟಿಸಲು.

**ಇವರಿಗೆ,**

1) ಪ್ರಧಾನ ಮಹಾಲೇಖಪಾಲರು (ಸಿ ಮತ್ತು ಸಿಎ) ಕರ್ನಾಟಕ, ಬೆಂಗಳೂರು.
2) ಸರ್ಕಾರದ ಮುಖ್ಯ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.